ವಿಜಯ ಕರ್ನಾಟಕ

ಮಂಗಳವಾರ,14 ಮಾರ್ಚ್ 2023,

# ವಿಶ್ವ ಗ್ಲುಕೋಮಾ ಸಪ್ತಾಹ: ಜಾಗೃತಿ ಶಿಕ್ಷಣ

■ **ವಿಕ ಸುದ್ದಿಲೋಕ** ಉಡುಪಿ

ವಿಶ್ವ ಗ್ಲುಕೋಮಾ ಸಪ್ತಾಹ-2023ರ ಅಂಗವಾಗಿ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗ ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಆಶ್ರಯದಲ್ಲಿ ಜಾಗೃತಿ ಶಿಕ್ಷಣ ಮತ್ತು ಗ್ಲುಕೋಮಾ ಉಚಿತ ತಪಾಸಣೆ ಶಿಬಿರ ನಡೆಯಿತು.

ಮಣಿಪಾಲ ಕೆಎಂಸಿ ಡೀನ್ ಡಾ. ಪದ್ಮರಾಜ ಹೆಗ್ಡೆ ಉಚಿತ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, ಗ್ಲುಕೋಮಾ ಒಂದು ನಿಶ್ಯಬ್ಧ ದೃಷ್ಟಿ ಚೋರ, ನಿಧಾನವಾಗಿ ಸಂಪೂರ್ಣ ದೃಷ್ಟಿಯ ನಾಶಕ್ಕೆ ಕಾರಣವಾಗುತ್ತದೆ ಎಂದರು.

ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್‌ನ ಡೀನ್ ಡಾ. ಜಿ. ಅರುಣ್ ಮಯ್ಯ ಗ್ಲುಕೋಮಾ ಕುರಿತಾದ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಗ್ಲುಕೋಮಾ ಸಪ್ತಾಹ ಕಾರ್ಯಕ್ರಮಕ್ಕಾಗಿ ಶ್ರಮಿಸುತ್ತಿರುವ ಸ್ವಯಂ ಸೇವಕರಿಗೆ ಪ್ರಶಂಸಾ ಪತ್ರ ವಿತರಿಸಿದರು. ಮಾಹೆ ಮಣಿಪಾಲ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಉಪಸ್ಥಿತರಿದ್ದರು.

ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಯೋಗೀಶ್ ಎಸ್. ಕಾಮತ್ ಸ್ವಾಗತಿಸಿದರು. ನೇತ್ರ ಚಿಕಿತ್ಸಾ ವಿಭಾಗದ ಸಹ ಪ್ರಾಧ್ಯಾಪಕಿ ಡಾ.ನೀತಾ ಕೆಐಆರ್ ಗ್ಲುಕೋಮಾವನ್ನು ಆರಂಭಿಕ ಹಂತದಲ್ಲಿ ಪತ್ತೆಯ ಮಹತ್ವದ ಕುರಿತು ಮಾತನಾಡಿದರು. ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥರಾದ ಡಾ. ಕೃತಿಕಾ ಎಸ್. ವಂದಿಸಿದರು. 500ಕ್ಕೂ ಹೆಚ್ಚು ಜನರು ಇಂದಿನ ಶಿಬಿರದ ಪ್ರಯೋಜನ ಪಡೆದುಕೊಂಡರು.



14-3-2023
UDAYAVANI - MANIPAL

**ಕಸ್ತೂರ್ಬಾ ಆಸ್ಪತ್ರೆ, ಮಣಿಪಾಲ**

# ವಿಶ್ವ ಗ್ಲುಕೋಮಾ ಜಾಗೃತಿ ಸಪ್ತಾಹ, ಉಚಿತ ತಪಾಸಣೆ

**ಉಡುಪಿ, ಮಾ. 13:** ಗ್ಲುಕೋಮಾ ಕಾಯಿಲೆಯು ಶಾಶ್ವತ ಕುರುಡುತನಕ್ಕೆ ಕಾರಣವಾಗಿದೆ. ವಿಶ್ವ ಗ್ಲುಕೋಮಾ ಸಪ್ತಾಹ-2023ರ ಅಂಗವಾಗಿ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್‌ನ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗದ ಆಶ್ರಯದಲ್ಲಿ ಸೋಮವಾರ ಗ್ಲುಕೋಮಾ ಜಾಗೃತಿ ಶಿಕ್ಷಣ ಮತ್ತು ಉಚಿತ ತಪಾಸಣೆ ಶಿಬಿರ ನಡೆಯಿತು.

ಕೆಎಂಸಿ ಡೀನ್ ಡಾ। ಪದ್ಮರಾಜ ಹೆಗ್ಡೆ ಶಿಬಿರ ಉದ್ಘಾಟಿಸಿ, ಗ್ಲುಕೋಮಾ ನಿಶ್ಯಬ್ದ ದೃಷ್ಟಿ ಚೋರ, ನಿಧಾನವಾಗಿ ಸಂಪೂರ್ಣ ದೃಷ್ಟಿಯ ನಾಶಕ್ಕೆ ಕಾರಣವಾಗುತ್ತದೆ. ಗ್ಲುಕೋಮಾ ಇರುವ ಬಗ್ಗೆ ಅರಿವೇ ಇಲ್ಲದವರು ಹೇಗೆ ಚಿಕಿತ್ಸೆ ಪಡೆಯಬೇಕು ಎಂಬುದನ್ನು ತಿಳಿಸಿದರು.



ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್‌ನ ಡೀನ್ ಡಾ। ಜಿ.ಅರುಣ್ ಮಯ್ಯ ಅವರು ಗ್ಲುಕೋಮಾ ಕುರಿತಾದ ಮಾಹಿತಿ ಕೈಪಿಡಿ ಬಿಡುಗಡೆ ಮಾಡಿದರು. ಕಸ್ತೂರ್ಬಾ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ್ ಶೆಟ್ಟಿ ಅವರು ಗ್ಲುಕೋಮಾ ಸಪ್ತಾಹದ ಸ್ವಯಂಸೇವಕರಿಗೆ ಪ್ರಶಂಸಾ ಪತ್ರ ವಿತರಿಸಿದರು. ಮಾಹೆ ಬೋಧನಾ ಆಸ್ಪತ್ರೆಗಳ ಮುಖ್ಯ ನಿರ್ವಹಣಾಧಿಕಾರಿ ಡಾ। ಆನಂದ್ ವೇಣುಗೋಪಾಲ್ ಉಪಸ್ಥಿತರಿದ್ದರು.

ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ। ಯೋಗೀಶ್ ಎಸ್. ಕಾಮತ್ ಸ್ವಾಗತಿಸಿ, ಮಾ. 15ರಂದು ಉಡುಪಿಯ ಡಾ। ಟಿ.ಎಂ.ಎ. ಪೈ ಆಸ್ಪತ್ರೆ ಹಾಗೂ ಮಾ.17ರಂದು ಕಾರ್ಕಳದ ಡಾ।ಟಿ. ಎಂ.ಎ. ಪೈ ರೋಟರಿ ಆಸ್ಪತ್ರೆಯಲ್ಲಿ ಶಿಬಿರ ನಡೆಯಲಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆಯಬಹುದು ಎಂದರು

ನೇತ್ರ ಚಿಕಿತ್ಸೆ ವಿಭಾಗದ ಸಹ ಪ್ರಾಧ್ಯಾಪಿಕೆ ಡಾ। ನೀತಾ ಕೆ.ಐ.ಆರ್. ಅವರು ಗ್ಲುಕೋಮಾವನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚುವ ಬಗ್ಗೆ ತಿಳಿಸಿದರು. ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥೆ ಡಾ। ಕೃತಿಕಾ ಎಸ್. ವಂದಿಸಿದರು. 500ಕ್ಕೂ ಹೆಚ್ಚು ಜನರು ಶಿಬಿರದ ಪ್ರಯೋಜನ ಪಡೆದರು.

ವಿಜಯವಾಣಿ
VIJAYAVANI » MANGALURU
ಮಂಗಳವಾರ 14 ಮಾರ್ಚ್ 2023
14 MARCH 2023

## ವಿಶ್ವ ಗ್ಲುಕೋಮಾ ಸಪ್ತಾಹದಲ್ಲಿ ಕೆಎಂಸಿ ಡೀನ್ ಡಾ.ಪದ್ಮರಾಜ ಹೆಗ್ಡೆ ಮಾಹಿತಿ

# ಗ್ಲುಕೋಮಾ ಕಾಯಿಲೆ ನಿಶ್ಶಬ್ದ ದೃಷ್ಟಿ ಚೋರ

■ ವಿಜಯವಾಣಿ ಸುದ್ದಿಜಾಲ ಉಡುಪಿ

ಗ್ಲುಕೋಮಾ ಕಾಯಿಲೆ ಶಾಶ್ವತ ಕುರುಡುತನಕ್ಕೆ ಒಂದು ಪ್ರಮುಖ ಕಾರಣವಾಗಿದೆ. ಗ್ಲುಕೋಮಾ ನಿಶ್ಯಬ್ದ ದೃಷ್ಟಿ ಚೋರ, ನಿಧಾನವಾಗಿ ಸಂಪೂರ್ಣ ದೃಷ್ಟಿಯ ನಾಶಕ್ಕೆ ಕಾರಣವಾಗುತ್ತದೆ. ಆದ್ದರಿಂದ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮತ್ತು ಗ್ಲುಕೋಮಾ ರೋಗಿಗಳಿಗೆ ಚಿಕಿತ್ಸೆ ನೀಡುವ ಬಗ್ಗೆ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಕೆಎಂಸಿ ಮಣಿಪಾಲ ಡೀನ್ ಡಾ.ಪದ್ಮರಾಜ ಹೆಗ್ಡೆ ಹೇಳಿದರು.

ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಸೋಮವಾರ ವಿಶ್ವ ಗ್ಲುಕೋಮಾ ಸಪ್ತಾಹ ಅಂಗವಾಗಿ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗ ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಸಂಯುಕ್ತ ಆಶ್ರಯದಲ್ಲಿ ಜಾಗೃತಿ ಶಿಕ್ಷಣ ಮತ್ತು ಉಚಿತ ಗ್ಲುಕೋಮಾ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಡೀನ್ ಡಾ.ಜಿ.ಅರುಣ್ ಮಯ್ಯ ಗ್ಲುಕೋಮಾ ಕುರಿತಾದ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಸ್ವಯಂಸೇವಕರಿಗೆ ಪ್ರಶಂಸಾ ಪತ್ರ ವಿತರಿಸಿದರು. ಮಾಹೆ ಮುಖ್ಯನಿರ್ವಹಣಾಧಿಕಾರಿ ಡಾ.ಆನಂದ್ ವೇಣುಗೋಪಾಲ್ ಉಪಸ್ಥಿತರಿದ್ದರು.

ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಯೋಗೀಶ್ ಎಸ್. ಕಾಮತ್ ಸ್ವಾಗತಿಸಿದರು. ನೇತ್ರ ಚಿಕಿತ್ಸಾ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ನೀತಾ ಕೆಐಆರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥೆ ಡಾ. ಕೃತಿಕಾ ಎಸ್. ವಂದಿಸಿದರು. 500 ಕ್ಕೂ ಹೆಚ್ಚು ಜನರು ಶಿಬಿರದ ಪ್ರಯೋಜನ ಪಡೆದುಕೊಂಡರು.



ವಿಶ್ವ ಗ್ಲುಕೋಮಾ ಸಪ್ತಾಹದಲ್ಲಿ ಡೀನ್ ಡಾ.ಜಿ.ಅರುಣ್ ಮಯ್ಯ ಗ್ಲುಕೋಮಾ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಕೆಎಂಸಿ ಡೀನ್ ಡಾ.ಪದ್ಮರಾಜ ಹೆಗ್ಡೆ, ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಮತ್ತಿತರರಿದ್ದರು.

THE CANARA POST

# Glaucoma Awareness Week 2023: Free screening and camp organized in Manipal




**Manipal, March 13, 2023:** In observance of World Glaucoma Week, the Department of Ophthalmology at Kasturba Medical College and Hospital, Manipal, and the Department of Optometry –MCHP organized a free glaucoma screening and awareness program today. Glaucoma, which is a leading cause of permanent blindness, is the focus of World Glaucoma Week, celebrated annually during the second week of March.

The theme for this year's Glaucoma Week is "The world is bright, save your sight," emphasizing the importance of regular testing to preserve one's vision. Dr. Padmaraj Hegde inaugurated the free screening camp and emphasized that glaucoma is a "silent thief of vision," slowly leading to total vision loss. He stated that World Glaucoma Week is a unique campaign to draw attention to preventable, irreversible blindness worldwide.

Dr. G Arun Maiya, the Dean of Manipal College of Health Profession, released an information brochure on Glaucoma during the event. Dr. Avinash Shetty, the Medical Superintendent at Kasturba Hospital, Manipal, presented Certificates of Appreciation to the volunteers working for the Glaucoma Week program. Dr. Anand Venugopal, the COO of Teaching Hospital, MAHE, Manipal, was also present.




Dr. Yogish S Kamath, the Head of the Department of Ophthalmology, welcomed the gathering and announced that the glaucoma screening camp will be held at Dr. TMA Pai Hospital, Udupi, on March 15th, and at Dr. T M A Pai Rotary Hospital Karkala on March 17th. He encouraged the general public to take advantage of these screening opportunities. Dr. Neetha KIR, an Associate Professor, gave an overview of the program and emphasized the importance of early detection of glaucoma.

Dr. Krithica S, the Head of the Department of Optometry, proposed a vote of thanks, and more than 500 people benefited from today's camp. This awareness program is a noble initiative to create awareness among the general public and treat patients with glaucoma.

BSV ACADEMY DOWNLOA



# ಕೆ.ಎಂ.ಸಿ ಮಣಿಪಾಲ: ಉಚಿತ ಗ್ಲುಕೋಮಾ ತಪಾಸಣಾ ಶಿಬಿರ

By **Udupi Bulletin News Desk** - March 13, 2023 0



**ಉಡುಪಿ, ಮಾ. 13:** ಗ್ಲುಕೋಮಾ ಕಾಯಿಲೆಯು ಶಾಶ್ವತ ಕುರುಡುತನಕ್ಕೆ ಒಂದು ಪ್ರಮುಖ ಕಾರಣವಾಗಿದೆ. ಗ್ಲುಕೋಮಾದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶ್ವ ಗ್ಲುಕೋಮಾ ಸಪ್ತಾಹವನ್ನು ಪ್ರತಿವರ್ಷ ಮಾರ್ಚ್ ಎರಡನೇ ವಾರದಲ್ಲಿ ವಿಶ್ವದಾದ್ಯಂತ ಆಚರಿಸಲಾಗುತ್ತದೆ. ವಿಶ್ವ ಗ್ಲುಕೋಮಾ ಸಪ್ತಾಹ 2023 ರ ಅಂಗವಾಗಿ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗ -ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಇವರ ಸಂಯುಕ್ತ ಆಶ್ರಯದಲ್ಲಿ ಸೋಮವಾರ ಜಾಗೃತಿ ಶಿಕ್ಷಣ ಮತ್ತು ಉಚಿತ ಗ್ಲುಕೋಮಾ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು.

'ವಿಶ್ವ ಪ್ರಕಾಶಮಾನವಾಗಿದೆ, ನಿಮ್ಮ ದೃಷ್ಟಿಯನ್ನು ಉಳಿಸಿಕೊಳ್ಳಿ' ಎಂಬ ಧ್ಯೇಯವಾಕ್ಯದಿಂದ ಇದನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಅಂದರೆ ನಿಯಮಿತ ಪರೀಕ್ಷೆಯೊಂದಿಗೆ ಜನರು ನಮ್ಮ ಸುತ್ತಲಿನ ಪ್ರಪಂಚವನ್ನು ನೋಡುತ್ತಲೇ ಇರುತ್ತಾರೆ ಎಂಬ ಭರವಸೆಯನ್ನು ಇದು ಪ್ರತಿಬಿಂಬಿಸುತ್ತದೆ.

ಕೆಎಂಸಿ ಮಣಿಪಾಲದ ಡೀನ್ ಡಾ. ಪದ್ಮರಾಜ ಹೆಗ್ಡೆ ಉಚಿತ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, ಗ್ಲುಕೋಮಾ ಒಂದು ನಿಶ್ಯಬ್ದ ದೃಷ್ಟಿ ಚೋರ, ನಿಧಾನವಾಗಿ ಸಂಪೂರ್ಣ ದೃಷ್ಟಿಯ ನಾಶಕ್ಕೆ ಕಾರಣವಾಗುತ್ತದೆ. ವಿಶ್ವ ಗ್ಲುಕೋಮಾ ಸಪ್ತಾಹವು ವಿಶ್ವದಾದ್ಯಂತ ತಡೆಗಟ್ಟಬಹುದಾದ, ಬದಲಾಯಿಸಲಾಗದ ಅಂಧತ್ವದ ಕುರಿತು ಗಮನ ಸೆಳೆಯುವ ಒಂದು ವಿಶಿಷ್ಟ ಅಭಿಯಾನವಾಗಿದೆ. ಈ ಗ್ಲುಕೋಮಾ ಕಾಯಿಲೆ ಇರುವ ಬಗ್ಗೆ ಅರಿವೇ ಇಲ್ಲದವರು, ಈ ಕಾಯಿಲೆಗೆ ಹೇಗೆ ಚಿಕಿತ್ಸೆ ಪಡೆಯಬೇಕು ಎಂದು ತಿಳಿಯದವರೂ ಸಾಕಷ್ಟಿದ್ದಾರೆ ಎಂದರು. ಆದ್ದರಿಂದ ಈ ಜಾಗೃತಿ ಕಾರ್ಯಕ್ರಮವು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮತ್ತು ಗ್ಲುಕೋಮಾ ರೋಗಿಗಳಿಗೆ ಚಿಕಿತ್ಸೆ ನೀಡುವ ಕಾರ್ಯದ ಒಂದು ಉತ್ತಮ ಕಾರ್ಯಕ್ರಮವಾಗಿದೆ ಎಂದರು.

ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಡೀನ್ ಡಾ. ಜಿ.ಅರುಣ್ ಮಯ್ಯ ಅವರು ಗ್ಲುಕೋಮಾ ಕುರಿತಾದ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ್ ಶೆಟ್ಟಿ ಅವರು ಗ್ಲುಕೋಮಾ ಸಪ್ತಾಹ ಕಾರ್ಯಕ್ರಮಕ್ಕಾಗಿ ಶ್ರಮಿಸುತ್ತಿರುವ ಸ್ವಯಂಸೇವಕರಿಗೆ ಪ್ರಶಂಸಾ ಪತ್ರ ವಿತರಿಸಿದರು. ಮಾಹೆ ಮಣಿಪಾಲ ಬೋಧನಾ ಆಸ್ಪತ್ರೆ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ್ ವೇಣುಗೋಪಾಲ್ ಉಪಸ್ಥಿತರಿದ್ದರು.

ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ಯೋಗೀಶ್ ಎಸ್ ಕಾಮತ್ ಸ್ವಾಗತಿಸಿ, ಇಂದು ಗ್ಲುಕೋಮಾ ಚಿಕಿತ್ಸಾ ಶಿಬಿರ ಇಲ್ಲಿ ನಡೆಯುತ್ತಿದ್ದು ಮಾರ್ಚ್ 15ರಂದು ಡಾ. ಟಿಎಂಎ ಪೈ ಉಡುಪಿಯಲ್ಲಿ ಮತ್ತು ಮಾರ್ಚ್ 17 ರಂದು ಡಾ. ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದಲ್ಲಿ ನಡೆಯಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದ ಕುರಿತು ಅವಲೋಕನ ನೀಡಿದ ನೇತ್ರ ಚಿಕಿತ್ಸಾ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ನೀತಾ ಕೆಐಆರ್ ಅವರು ಗ್ಲುಕೋಮಾವನ್ನು ಆರಂಭಿಕ ಹಂತದಲ್ಲಿ ಪತ್ತೆಯ ಮಹತ್ವದ ಕುರಿತು ಮಾತನಾಡಿದರು. ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥರಾದ ಡಾ. ಕೃತಿಕಾ ಎಸ್ ವಂದಿಸಿದರು. 500 ಕ್ಕೂ ಹೆಚ್ಚು ಜನರು ಇಂದಿನ ಶಿಬಿರದ ಪ್ರಯೋಜನ ಪಡೆದುಕೊಂಡರು.

# ಗ್ಲುಕೋಮಾದಿಂದ ಶಾಶ್ವತ ಕುರುಡುತನ

By lokabandhu news desk March 13, 2023

Share



**ಗ್ಲುಕೋಮಾದಿಂದ ಶಾಶ್ವತ ಕುರುಡುತನ**

**ಉಡುಪಿ:** ಗ್ಲುಕೋಮಾ ಕಾಯಿಲೆ ಶಾಶ್ವತ ಕುರುಡುತನಕ್ಕೆ ಪ್ರಮುಖ ಕಾರಣ. ನಿಧಾನವಾಗಿ ಅದು ಸಂಪೂರ್ಣ ದೃಷ್ಟಿ ನಾಶಕ್ಕೆ ಕಾರಣವಾಗುತ್ತದೆ. ಆದ್ದರಿಂದ ಈ ಕಾಯಿಲೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅಗತ್ಯ ಎಂದು ಮಣಿಪಾಲ ಕೆಎಂಸಿ ಡೀನ್ ಡಾ. ಪದ್ಮರಾಜ ಹೆಗ್ಡೆ ಹೇಳಿದರು.



ಗ್ಲುಕೋಮಾ ದಿನಾಚರಣೆ ಅಂಗವಾಗಿ ಕೆಎಂಸಿ ಮಣಿಪಾಲ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗ ಆಶ್ರಯದಲ್ಲಿ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಸಹಯೋಗದೊಂದಿಗೆ ಸೋಮವಾರ ನಡೆದ ಗ್ಲುಕೋಮಾ ಜಾಗೃತಿ ಮತ್ತು ಉಚಿತ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಡೀನ್ ಡಾ. ಅರುಣ ಮಯ್ಯ, ಗ್ಲುಕೋಮಾ ಕುರಿತ ಮಾಹಿತಿ ಕೈಪಿಡಿ ಬಿಡುಗಡೆ ಮಾಡಿದರು. ಕೆಎಂಸಿ ಆಸ್ಪತ್ರೆ ಮಣಿಪಾಲ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ಗ್ಲುಕೋಮಾ ಸಪ್ತಾಹ ಸಂದರ್ಭದಲ್ಲಿ ಶ್ರಮಿಸುತ್ತಿರುವ ಸ್ವಯಂಸೇವಕರಿಗೆ ಪ್ರಶಂಸಾಪತ್ರ ವಿತರಿಸಿದರು. ಮಣಿಪಾಲ ಮಾಹೆ ಬೋಧನಾ ಆಸ್ಪತ್ರೆ ಸಿಓಒ ಡಾ. ಆನಂದ್ ವೇಣುಗೋಪಾಲ್ ಇದ್ದರು.



ನೇತ್ರ ಚಿಕಿತ್ಸಾ ವಿಭಾಗ ಮುಖ್ಯಸ್ಥ ಡಾ. ಯೋಗೇಶ್ ಎಸ್. ಕಾಮತ್ ಸ್ವಾಗತಿಸಿ, ಮಾರ್ಚ್ 15ರಂದು ಉಡುಪಿ ಡಾ. ಟಿಎಂಎ ಪೈ ಆಸ್ಪತ್ರೆ ಮತ್ತು 17ರಂದು ಕಾರ್ಕಳ ಡಾ. ಟಿಎಂಎ ಪೈ ರೋಟರಿ ಆಸ್ಪತ್ರೆಯಲ್ಲಿ ಶಿಬಿರ ನಡೆಯಲಿದೆ ಎಂದರು.

ನೇತ್ರ ಚಿಕಿತ್ಸಾ ವಿಭಾಗ ಸಹ ಪ್ರಾಧ್ಯಾಪಕಿ ಡಾ. ನೀತಾ ಕೆಬಿಆರ್, ಗ್ಲುಕೋಮಾವನ್ನು ಆರಂಭಿಕ ಹಂತದಲ್ಲಿ ಪತ್ತೆ ಮಾಡುವ ಮಹತ್ವದ ಕುರಿತು ಮಾತನಾಡಿದರು. ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥೆ ಡಾ. ಕೃತಿಕಾ ಎಸ್ .ವಂದಿಸಿದರು.

500ಕ್ಕೂ ಹೆಚ್ಚು ಮಂದಿ ಶಿಬಿರದ ಪ್ರಯೋಜನ ಪಡೆದುಕೊಂಡರು

KARAVALI XPRESS.COM
ವಿಶ್ವಾಸದ ನಡೆ
Tuesday, March 14, 2023

ಆರೋಗ್ಯ

# ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದಲ್ಲಿ – ಜಾಗೃತಿ ಶಿಕ್ಷಣ ಮತ್ತು ಉಚಿತ ಗ್ಲುಕೋಮಾ ತಪಾಸಣಾ ಶಿಬಿರ

By Janardhan Kodavoor/Team karavalixpress, March 14, 2023




ಉಡುಪಿ: ಗ್ಲುಕೋಮಾ ಕಾಯಿಲೆಯು ಶಾಶ್ವತ ಕುರುಡುತನಕ್ಕೆ ಒಂದು ಪ್ರಮುಖ ಕಾರಣವಾಗಿದೆ. ಗ್ಲುಕೋಮಾದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶ್ವ ಗ್ಲುಕೋಮಾ ಸಪ್ತಾಹವನ್ನು ಪ್ರತಿವರ್ಷ ಮಾರ್ಚ್ ಎರಡನೇ ವಾರದಲ್ಲಿ ವಿಶ್ವದಾದ್ಯಂತ ಆಚರಿಸಲಾಗುತ್ತದೆ. ವಿಶ್ವ ಗ್ಲುಕೋಮಾ ಸಪ್ತಾಹ 2023 ರ ಅಂಗವಾಗಿ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗ -ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಇವರ ಸಂಯುಕ್ತ ಆಶ್ರಯದಲ್ಲಿ ಇಂದು ಜಾಗೃತಿ ಶಿಕ್ಷಣ ಮತ್ತು ಉಚಿತ ಗ್ಲುಕೋಮಾ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು. "ವಿಶ್ವ ಪ್ರಕಾಶಮಾನವಾಗಿದೆ, ನಿಮ್ಮ ದೃಷ್ಟಿಯನ್ನು ಉಳಿಸಿಕೊಳ್ಳಿ " ಎಂಬ ಧ್ಯೇಯ ವಾಕ್ಯದಿಂದ ಇದನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಅಂದರೆ ನಿಯಮಿತ ಪರೀಕ್ಷೆಯೊಂದಿಗೆ ಜನರು ನಮ್ಮ ಸುತ್ತಲಿನ ಪ್ರಪಂಚವನ್ನು ನೋಡುತ್ತಲೇ ಇರುತ್ತಾರೆ ಎಂಬ ಭರವಸೆಯನ್ನು ಇದು ಪ್ರತಿಬಿಂಬಿಸುತ್ತದೆ.

ಕೆ ಎಂ ಸಿ ಮಣಿಪಾಲದ ಡೀನ್ ಡಾ ಪದ್ಮರಾಜ ಹೆಗ್ಡೆ ಉಚಿತ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ, " ಗ್ಲುಕೋಮಾ ಒಂದು ನಿಶ್ಯಬ್ದ ದೃಷ್ಟಿ ಚೋರ, ನಿಧಾನವಾಗಿ ಸಂಪೂರ್ಣ ದೃಷ್ಟಿಯ ನಾಶಕ್ಕೆ ಕಾರಣವಾಗುತ್ತದೆ. ವಿಶ್ವ ಗ್ಲುಕೋಮಾ ಸಪ್ತಾಹವು ವಿಶ್ವದಾದ್ಯಂತ ತಡೆಗಟ್ಟಬಹುದಾದ, ಬದಲಾಯಿಸಲಾಗದ ಅಂಧತ್ವದ ಕುರಿತು ಗಮನ ಸೆಳೆಯುವ ಒಂದು ವಿಶಿಷ್ಟ ಅಭಿಯಾನವಾಗಿದೆ . ಈ ಗ್ಲುಕೋಮಾ ಕಾಯಿಲೆ ಇರುವ ಬಗ್ಗೆ ಅರಿವೇ ಇಲ್ಲದವರು , ಈ ಕಾಯಿಲೆಗೆ ಹೇಗೆ ಚಿಕಿತ್ಸೆ ಪಡೆಯಬೇಕು ಎಂದು ತಿಳಿಯದವರೂ ಸಾಕಷ್ಟಿದ್ದಾರೆ ಎಂದರು. ಆದ್ದರಿಂದ ಈ ಜಾಗೃತಿ ಕಾರ್ಯಕ್ರಮವು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮತ್ತು ಗ್ಲುಕೋಮಾ ರೋಗಿಗಳಿಗೆ ಚಿಕಿತ್ಸೆ ನೀಡುವ ಕಾರ್ಯದ ಒಂದು ಉತ್ತಮ ಕಾರ್ಯಕ್ರಮವಾಗಿದೆ ಎಂದರು. ಡಾ.ಜಿ.ಅರುಣ್ ಮಯ್ಯ , ಡೀನ್, ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಅವರು ಗ್ಲುಕೋಮಾ ಕುರಿತಾದ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ್ ಶೆಟ್ಟಿ ಅವರು ಗ್ಲುಕೋಮಾ ಸಪ್ತಾಹ ಕಾರ್ಯಕ್ರಮಕ್ಕಾಗಿ ಶ್ರಮಿಸುತ್ತಿರುವ ಸ್ವಯಂಸೇವಕರಿಗೆ ಪ್ರಶಂಸಾ ಪತ್ರ ವಿತರಿಸಿದರು. ಡಾ ಆನಂದ್ ವೇಣುಗೋಪಾಲ್, ಮುಖ್ಯ ನಿರ್ವಹಣಾಧಿಕಾರಿಗಳು , ಬೋಧನಾ ಆಸ್ಪತ್ರೆಗಳು, ಮಾಹೆ ಮಣಿಪಾಲ ಉಪಸ್ಥಿತರಿದ್ದರು.

ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ ಯೋಗೀಶ್ ಎಸ್ ಕಾಮತ್ ಅವರು ಸ್ವಾಗತಿಸಿ, ಇಂದು ಗ್ಲುಕೋಮಾ ಚಿಕಿತ್ಸಾ ಶಿಬಿರ ಇಲ್ಲಿ ನಡೆಯುತ್ತಿದ್ದು ಮಾರ್ಚ್ 15ರಂದು ಡಾ ಟಿ ಎಂ ಎ ಪೈ ಉಡುಪಿಯಲ್ಲಿ ಮತ್ತು ಮಾರ್ಚ್ 17ರಂದು ಡಾ ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದಲ್ಲಿ ನಡೆಯಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಕಾರ್ಯಕ್ರಮದ ಕುರಿತು ಅವಲೋಕನ ನೀಡಿದ ನೇತ್ರ ಚಿಕಿತ್ಸಾ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ನೀತಾ ಕೆಬಿಆರ್ ಅವರು ಗ್ಲುಕೋಮಾವನ್ನು ಆರಂಭಿಕ ಹಂತದಲ್ಲಿ ಪತ್ತೆಯ ಮಹತ್ವದ ಕುರಿತು ಮಾತನಾಡಿದರು. ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥರಾದ ಡಾ. ಕೃತಿಕಾ ಎಸ್ ವಂದಿಸಿದರು. 500 ಕ್ಕೂ ಹೆಚ್ಚು ಜನರು ಇಂದಿನ ಶಿಬಿರದ ಪ್ರಯೋಜನ ಪಡೆದುಕೊಂಡರು.

# ಕಸ್ತೂರ್ಬಾ ಆಸ್ಪತ್ರೆಯಲ್ಲಿ ಜಾಗೃತಿ ಶಿಕ್ಷಣ ಮತ್ತು ಉಚಿತ ಗ್ಲುಕೋಮಾ ತಪಾಸಣಾ ಶಿಬಿರ

March 13, 2023

ಉಡುಪಿ: ಗ್ಲುಕೋಮಾ ಕಾಯಿಲೆಯು ಶಾಶ್ವತ ಕುರುಡುತನಕ್ಕೆ ಒಂದು ಪ್ರಮುಖ ಕಾರಣವಾಗಿದೆ. ಗ್ಲುಕೋಮಾದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವ ಉದ್ದೇಶದಿಂದ ವಿಶ್ವ ಗ್ಲುಕೋಮಾ ಸಪ್ತಾಹವನ್ನು ಪ್ರತಿವರ್ಷ ಮಾರ್ಚ್ ಎರಡನೇ ವಾರದಲ್ಲಿ ವಿಶ್ವದಾದ್ಯಂತ ಆಚರಿಸಲಾಗುತ್ತದೆ. ವಿಶ್ವ ಗ್ಲುಕೋಮಾ ಸಪ್ತಾಹ 2023 ರ ಅಂಗವಾಗಿ ಕಸ್ತೂರ್ಬಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನೇತ್ರಶಾಸ್ತ್ರ ವಿಭಾಗ ಮತ್ತು ಆಪ್ಟೋಮೆಟ್ರಿ ವಿಭಾಗ -ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಇವರ ಸಂಯುಕ್ತ ಆಶ್ರಯದಲ್ಲಿ ಇಂದು ಜಾಗೃತಿ ಶಿಕ್ಷಣ ಮತ್ತು ಉಚಿತ ಗ್ಲುಕೋಮಾ ತಪಾಸಣಾ ಶಿಬಿರ ಏರ್ಪಡಿಸಲಾಗಿತ್ತು."ವಿಶ್ವ ಪ್ರಕಾಶಮಾನವಾಗಿದೆ, ನಿಮ್ಮ ದೃಷ್ಟಿಯನ್ನು ಉಳಿಸಿಕೊಳ್ಳಿ" ಎಂಬ ಧ್ಯೇಯ ವಾಕ್ಯದಿಂದ ಇದನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಅಂದರೆ ನಿಯಮಿತ ಪರೀಕ್ಷೆಯೊಂದಿಗೆ ಜನರು ನಮ್ಮ ಸುತ್ತಲಿನ ಪ್ರಪಂಚವನ್ನು ನೋಡುತ್ತಲೇ ಇರುತ್ತಾರೆ ಎಂಬ ಭರವಸೆಯನ್ನು ಇದು ಪ್ರತಿಬಿಂಬಿಸುತ್ತದೆ.



ಕೆ.ಎಂ.ಸಿ ಮಣಿಪಾಲದ ಡೀನ್ ಡಾ ಪದ್ಮರಾಜ ಹೆಗ್ಡೆ ಉಚಿತ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿ," ಗ್ಲುಕೋಮಾ ಒಂದು ನಿಶ್ಯಬ್ದ ದೃಷ್ಟಿ ಚೋರ, ನಿಧಾನವಾಗಿ ಸಂಪೂರ್ಣ ದೃಷ್ಟಿಯ ನಾಶಕ್ಕೆ ಕಾರಣವಾಗುತ್ತದೆ. ವಿಶ್ವ ಗ್ಲುಕೋಮಾ ಸಪ್ತಾಹವು ವಿಶ್ವದಾದ್ಯಂತ ತಡೆಗಟ್ಟಬಹುದಾದ, ಬದಲಾಯಿಸಲಾಗದ ಅಂಧತ್ವದ ಕುರಿತು ಗಮನ ಸೆಳೆಯುವ ಒಂದು ವಿಶಿಷ್ಟ ಅಭಿಯಾನವಾಗಿದೆ. ಈ ಗ್ಲುಕೋಮಾ ಕಾಯಿಲೆ ಇರುವ ಬಗ್ಗೆ ಅರಿವೇ ಇಲ್ಲದವರು, ಈ ಕಾಯಿಲೆಗೆ ಹೇಗೆ ಚಿಕಿತ್ಸೆ ಪಡೆಯಬೇಕು ಎಂದು ತಿಳಿಯದವರೂ ಸಾಕಷ್ಟಿದ್ದಾರೆ ಎಂದರು. ಆದ್ದರಿಂದ ಈ ಜಾಗೃತಿ ಕಾರ್ಯಕ್ರಮವು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮತ್ತು ಗ್ಲುಕೋಮಾ ರೋಗಿಗಳಿಗೆ ಚಿಕಿತ್ಸೆ ನೀಡುವ ಕಾರ್ಯದ ಒಂದು ಉತ್ತಮ ಕಾರ್ಯಕ್ರಮವಾಗಿದೆ ಎಂದರು. ಡಾ.ಜಿ.ಅರುಣ್ ಮಯ್ಯ, ಡೀನ್, ಮಣಿಪಾಲ ಕಾಲೇಜ್ ಆಫ್ ಹೆಲ್ತ್ ಪ್ರೊಫೆಶನ್ ಅವರು ಗ್ಲುಕೋಮಾ ಕುರಿತಾದ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಿದರು. ಕಸ್ತೂರ್ಬಾ ಆಸ್ಪತ್ರೆ ಮಣಿಪಾಲದ ವೈದ್ಯಕೀಯ ಅಧೀಕ್ಷಕರಾದ ಡಾ.ಅವಿನಾಶ್ ಶೆಟ್ಟಿ ಅವರು ಗ್ಲುಕೋಮಾ ಸಪ್ತಾಹ ಕಾರ್ಯಕ್ರಮಕ್ಕಾಗಿ ಶ್ರಮಿಸುತ್ತಿರುವ ಸ್ವಯಂಸೇವಕರಿಗೆ ಪ್ರಶಂಸಾ ಪತ್ರ ವಿತರಿಸಿದರು. ಡಾ ಆನಂದ್ ವೇಣುಗೋಪಾಲ್, ಮುಖ್ಯ ನಿರ್ವಹಣಾಧಿಕಾರಿಗಳು, ಬೋಧನಾ ಆಸ್ಪತ್ರೆಗಳು, ಮಾಹೆ ಮಣಿಪಾಲ ಉಪಸ್ಥಿತರಿದ್ದರು.




ನೇತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ಯೋಗೀಶ್ ಎಸ್ ಕಾಮತ್ ಅವರು ಸ್ವಾಗತಿಸಿ, ಇಂದು ಗ್ಲುಕೋಮಾ ಚಿಕಿತ್ಸಾ ಶಿಬಿರ ಇಲ್ಲಿ ನಡೆಯುತ್ತಿದ್ದು ಮಾರ್ಚ್ 15ರಂದು ಡಾ ಟಿ ಎಂ ಎ ಪೈ ಉಡುಪಿಯಲ್ಲಿ ಮತ್ತು ಮಾರ್ಚ್ 17ರಂದು ಡಾ ಟಿ ಎಂ ಎ ಪೈ ರೋಟರಿ ಆಸ್ಪತ್ರೆ ಕಾರ್ಕಳದಲ್ಲಿ ನಡೆಯಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದ ಕುರಿತು ಅವಲೋಕನ ನೀಡಿದ ನೇತ್ರ, ಚಿಕಿತ್ಸಾ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ. ನೀತಾ ಕೆಬಿಆರ್ ಅವರು ಗ್ಲುಕೋಮಾವನ್ನು ಆರಂಭಿಕ ಹಂತದಲ್ಲಿ ಪತ್ತೆಯ ಮಹತ್ವದ ಕುರಿತು ಮಾತನಾಡಿದರು.




ಆಪ್ಟೋಮೆಟ್ರಿ ವಿಭಾಗ ಮುಖ್ಯಸ್ಥರಾದ ಡಾ. ಕೃತಿಕಾ ಎಸ್ ವಂದಿಸಿದರು. 500 ಕ್ಕೂ ಹೆಚ್ಚು ಜನರು ಇಂದಿನ ಶಿಬಿರದ ಪ್ರಯೋಜನ ಪಡೆದುಕೊಂಡರು.

**Other Links:**

https://youtu.be/1ZMZZW8gTGw